ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

**ಕೊರೋನಾ ಹಿನ್ನೆಲೆ** 20 ವರ್ಷಗಳಲ್ಲಿ ಮೊದಲ ಬಾರಿಗೆ ಸರ್ವ ಪಕ್ಷ ಸಭೆ ಇಲ್ಲದೆ ಅಧಿವೇಶನ

# ಇಂದಿನಿಂದ 2 ಶಿಫ್ಟಲ್ಲಿ ಸಂಸತ್ ಕಲಾಪ

## 18 ದಿನಗಳ ಕಾಲ ನಿತ್ಯ ಬೆಳಗ್ಗೆ ರಾಜ್ಯಸಭೆ, ಮಧ್ಯಾಹ್ನ ಲೋಕಸಭೆ ಕಲಾಪ

• **ಪಿಟಿಐ** ನವದೆಹಲಿ

ಕೊರೋನಾ ವೈರಸ್ ಅಬ್ಬರದ ನಡುವೆಯೇ ಸಂಸತ್ತಿನ ಉಭಯ ಸದನಗಳ ಮುಂಗಾರು ಅಧಿವೇಶನ ಸೋಮವಾರದಿಂದ ಆರಂಭವಾಗಲಿದೆ. ಹಿಂದೆಂದೂ ಕಂಡು-ಕೇಳರಿಯದ ರೀತಿಯಲ್ಲಿ ಕಲಾಪ ನಡೆಸಲಾಗುತ್ತಿದೆ. ಇದೇ ಮೊದಲ ಬಾರಿಗೆ ಎರಡೂ ಸದನಗಳನ್ನು ಬಳಸಿಕೊಂಡು ಒಂದು ಸದನದ ಕಲಾಪ ನಡೆಸುವುದು, ಸಾಮಾಜಿಕ ಅಂತರಕ್ಕೆ ಒತ್ತು ನೀಡುವುದು, ಎರಡು ಪಾಳಿಗಳಲ್ಲಿ ಕಲಾಪ ನಡೆಸುವುದು ಸೇರಿದಂತೆ ಹಲವು ವಿಭಿನ್ನತೆಗಳಿಗೆ ಸಾಕ್ಷಿಯಾಗಲಿರುವ ಈ ಅಧಿವೇಶನ ಐತಿಹಾಸಿಕವೆನಿಸಿದೆ.

ಚೀನಾ ವಿರುದ್ಧದ ಗಡಿ ಸಂಘರ್ಷ, ಕೊರೋನಾ ನಿರ್ವಹಣೆ, ಆರ್ಥಿಕತೆ ಕುಸಿತ, ಜಿಎಸ್‌ಟಿ ನಷ್ಟ ಪರಿಹಾರ ವಿಚಾರಗಳನ್ನು ಮುಂದಿಟ್ಟುಕೊಂಡು ಸರ್ಕಾರದ ಮೇಲೆ ಮುಗಿಬೀಳಲು ಕಾಂಗ್ರೆಸ್ ನೇತೃತ್ವದಲ್ಲಿ ಪ್ರತಿಪಕ್ಷಗಳು ಸಜ್ಜಾಗಿವೆ. ಇದಕ್ಕೆ ತಕ್ಕ ತಿರುಗೇಟು ಕೊಡಲು ಆಡಳಿತಾರೂಢ ಬಿಜೆಪಿ ಕೂಡ ಸಜ್ಜಾಗಿದ್ದು, ವಿಭಿನ್ನ ಕಲಾಪದಲ್ಲೂ ಭರ್ಜರಿ ವಾಕ್ಸಮರವನ್ನು ನಿರೀಕ್ಷಿಸಲಾಗುತ್ತಿದೆ. ಸರ್ಕಾರ 45 ಮಸೂದೆಗಳನ್ನು ಮಂಡಿಸಲು ಉದ್ದೇಶಿಸಿದ್ದು, ಆ ಪೈಕಿ ಕೆಲವನ್ನು ಅತ್ಯುಗ್ರವಾಗಿ ವಿರೋಧಿಸಲು ಪ್ರತಿಪಕ್ಷಗಳು ಸಜ್ಜಾಗಿವೆ.

**ಏಕೆ ಈ ಕಲಾಪ ವಿಶೇಷ?:** ಒಂದು ಕಲಾಪದಿಂದ ಮತ್ತೊಂದಕ್ಕೆ 6 ತಿಂಗಳಿಗಿಂತ ಅಧಿಕ ಅಂತರವಿರಬಾರದು ಎಂಬ ನಿಯಮವಿದೆ. ಆದ ಕಾರಣ ಕೊರೋನಾ ನಡುವೆಯೇ ಮುಂಗಾರು ಅಧಿವೇಶನವನ್ನು ಆಯೋಜನೆ ಮಾಡಲಾಗಿದೆ. ಸೋಮವಾರದಿಂದ ಅ.1ರ ವರೆಗೆ ಕಲಾಪ ನಡೆಯಲಿದೆ. ಸಾಮಾನ್ಯವಾಗಿ ಶನಿವಾರ ಅದರಲ್ಲೂ ವಿಶೇಷವಾಗಿ ಭಾನುವಾರ ಕಲಾಪ ನಡೆಯುವುದಿಲ್ಲ.

➘5



### ಏನೇನು ವಿಶೇಷ ಸಿದ್ಧತೆ?

- ಎರಡು ಪಾಳಿಗಳಲ್ಲಿ ಲೋಕಸಭೆ ಹಾಗೂ ರಾಜ್ಯಸಭೆ ಕಲಾಪ
- ಭಾನುವಾರ, ರಜೆ ದಿನ ಸೇರಿ ಸತತ 18 ದಿನಗಳ ಅಧಿವೇಶನ
- ಒಮ್ಮೆಗೆ ಕಲಾಪ ನಡೆಸಲು ಎರಡೂ ಸದನದ ಸ್ಥಳ ಬಳಕೆ
- ಎಂಪಿ ಸೀಟುಗಳ ನಡುವೆ ಅಂತರ, ಪ್ಲಾಸ್ಟಿಕ್ ಶೀಟ್ ಅಳವಡಿಕೆ
- ಒಂದು ಅಧಿವೇಶನದ ಬಳಿಕ ಸದನ ಸಂಪೂರ್ಣ ಸ್ಯಾನಿಟೈಸ್
- ಹಿರಿಯ ಸಂಸದರಿಗೆ ವಿಶೇಷ ಚೇಂಬರ್